247 ಶ್ರೀ. ಖಾದರ್ ಯು.ಟಿ. (ಮಂಗಳೂರು)
ಮಾನ್ಯ ಗೃಹ ಸಚಿವರು

ಅ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚಿಗೆ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ;

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚಿಗೆ ಕಾನೂನು ಸುವ್ಯವಸ್ಥೆ ಕುಸಿದಿರುವುದಿಲ್ಲ.

ಆ ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಅನ್ವಯಿಸುವುದಿಲ್ಲ.

ಇ ಕಾನೂನು ಸುವ್ಯವಸ್ಥೆಯನ್ನು ಬಲಪಡಿಸಲು ವಿಶೇಷ ಪೊಲೀಸ್ ಪಡೆಯನ್ನು ರಚಿಸುವ ಆಲೋಚನೆ ಸರ್ಕಾರದ ಮುಂದಿದೆಯೇ?

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಜಿಲ್ಲೆಯ ನುರಿತ ಅಧಿಕಾರಿ ಸಿಬ್ಬಂದಿಗಳನ್ನೊಳಗೊಂಡ ಕ್ಯೂ.ಆರ್.ಟಿ(ಕ್ವಿಕ್ ರಿಆಕ್ಷನ್ ಟೀಮ್)ಯನ್ನು ರಚಿಸಲಾಗಿದೆ. ವಧ್ವಂಸಕ ಕೃತ್ಯಗಳಲ್ಲಿ ತೊಡಗವವರನ್ನು ನಿಗ್ರಹಿಸಲು ಜಿಲ್ಲೆಯಲ್ಲಿನ ನುರಿತ ಶಾರ್ಪ್ ಶೂಟಗ್‌ಗಳನ್ನು ಗುರುತಿಸಿ ತರಬೇತಿಗೊಳಿಸಲಾಗಿದೆ. ಅಲ್ಲದೇ ಜಿಲ್ಲಾ ರೌಡಿ ನಿಗ್ರಹದಳ ಮತ್ತು ಜಿಲ್ಲಾ ಅಪರಾಧ ಪತ್ತೆದಳಕ್ಕೆ ನುರಿತ ಸಿಬ್ಬಂದಿಗಳನ್ನು ನಿಯೋಜಿಸಿ ಕಾರ್ಯಗತಗೊಳಿಸಲಾಗಿದೆ.

259 ಶ್ರೀ. ವಿಶ್ವನಾಥ ಎಸ್.ಆರ್. (ಯಲಹಂಕ)
ಮಾನ್ಯ ಮುಖ್ಯಮಂತ್ರಿಯವರು

ಅ. ಬೆಂಗಳೂರು ಸುತ್ತ ಮುತ್ತ ಅಕ್ರಮ ಗಣಿಗಾರಿಕೆ ನಡೆಸುತ್ತಿರುವುದು ಹಾಗೂ ಅಕ್ರಮವಾಗಿ ಮರಳನ್ನು ಫಿಲ್ಟರ್ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು. ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ. ಬಂದಿದ್ದಲ್ಲಿ, ಅದರ ನಿಯಂತ್ರಣಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ತೀವ್ರ ನಿಗಾವಹಿಸುವಂತೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆಯಲ್ಲದೇ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೂಪರಿಂಟೆಂಡೆಂಟ್ ಆಫ್ ಪೋಲಿಸ್, ಆಯಾ ಜಿಲ್ಲೆಯ ಉಪನಿರ್ದೇಶಕರು/ಹಿರಿಯ ಭೂವಿಜ್ಞಾನಿ, ಉಪ ಅರಣ್ಯ ಸಂರಕ್ಷಣಾಧಿಕಾರಿ, ಜಿಲ್ಲಾ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಹಾಗೂ ಪ್ರಾದೇಶಿಕ ಸಾರಿಗೆ ಅಧಿಕಾರಿಯನ್ನೊಳಗೊಂಡ ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ:ಸಿಐ 194 ಎಂಎಂಎಂ 2005, ದಿನಾಂಕ:16-11-2005 ರಲ್ಲಿ ರಚಿಸಲಾಗಿದೆ.